ಸ್ವಾತಂತ್ರ್ಯದ ಅಮೃತಮಹೋತ್ಸವ

ಬೆಂಗಳೂರು ಮೆಟ್ರೋ ರೈಲು ನಿಗಮ ನಿಯಮಿತ
BANGALORE METRO RAIL CORPORATION LIMITED

ಸಂಖ್ಯೆ: ಬಿಎಂಆರ್‌ಸಿಎಲ್/ ಮುಸಾಸಂಅ/ಮಾಧ್ಯಮ ಪ್ರಕಟಣೆ/2023-24 ದಿನಾಂಕ: 19.08.2023

# ಮಾಧ್ಯಮ ಪ್ರಕಟಣೆ

**ವಿಷಯ: ನಮ್ಮ ಮೆಟ್ರೋ ನಿಲ್ದಾಣಗಳಲ್ಲಿ ನ್ಯಾಷನಲ್ ಕಾಮನ್ ಮೊಬಿಲಿಟಿ (ಎನ್.ಸಿ.ಎಂ.ಸಿ ) ಕಾರ್ಡ್‌ಗಳ ಮಾರಾಟ**

ಪ್ರಸ್ತುತ ಬಳಕೆಯಲ್ಲಿರುವ ಕಾಂಟ್ಯಾಕ್ಟ್‌ಲೆಸ್ ಸ್ಮಾರ್ಟ್ ಕಾರ್ಡ್‌ಗಳು (CSC) ಕ್ಲೋಸ್ಡ್ ಲೂಪ್ ಕಾರ್ಡ್‌ಗಳಾಗಿದ್ದು, ನಮ್ಮ ಮೆಟ್ರೋ ಪ್ರಯಾಣದಲ್ಲಿ ಮಾತ್ರ ಬಳಸಬಹುದಾಗಿದೆ. "ಒನ್ ನೇಷನ್ ಒನ್ ಕಾರ್ಡ್" ಗೆ ಅನುಗುಣವಾಗಿ ರುಪೇ ನ್ಯಾಷನಲ್ ಕಾಮನ್ ಮೊಬಿಲಿಟಿ ಕಾರ್ಡ್ (ಎನ್‌ಸಿಎಂಸಿ) ತೆರೆದ ಲೂಪ್ ಕಾರ್ಡ್‌ಗಳಾಗಿದ್ದು, ಈ ಕಾರ್ಡನ್ನು ದೇಶದ ಎಲ್ಲಾ ಸಾರಿಗೆ ವ್ಯವಸ್ಥೆಗಳಲ್ಲಿ ಹಾಗೂ ಹೆಚ್ಚುವರಿಯಾಗಿ, ರಿಟೇಲ್ ಅಂಗಡಿ, ಪೆಟ್ರೋಲ್ ಬಂಕ್‌ಗಳು, ಶಾಪಿಂಗ್ ಇತ್ಯಾದಿ ಅಗತ್ಯಗಳಿಗಾಗಿ ಬಳಸಲು ಅನುಕೂಲಕರವಾಗಿರುತ್ತದೆ.

ದಿ 21.08.2023 ರಿಂದ ಎಲ್ಲಾ ಮೆಟ್ರೋ ನಿಲ್ದಾಣಗಳಲ್ಲಿ ರುಪೇ ಎನ್‌ಸಿಎಂಸಿ ಕಾರ್ಡ್‌ಗಳು ಖರೀದಿಗೆ ಲಭ್ಯವಿರುತ್ತದೆ.

ರುಪೇ ಎನ್‌ಸಿಎಂಸಿ ಕಾರ್ಡ್ ತ್ವರಿತ ವಿತರಣೆಗಾಗಿ, ಪ್ರಯಾಣಿಕರು ತಮ್ಮ ಗ್ರಾಹಕರ ವಿವರಗಳನ್ನು (KYC), "NAMMAMETRO.AGSINDIA.COM" ವೆಬ್‌ಸೈಟ್ ಅಥವಾ "BMRCL RBL Bank NCMC" ಮೊಬೈಲ್ ಅಪ್ಲಿಕೇಶನ್‌ನಲ್ಲಿ ಸ್ವಯಂ-ನೋಂದಣಿ ಮಾಡಿಕೊಂಡು, ನೋಂದಣಿ ಸಂಖ್ಯೆ / ನೋಂದಾಯಿತ ಮೊಬೈಲ್ ಸಂಖ್ಯೆಯನ್ನು ಟಿಕೆಟ್ ಕೌಂಟರ್ ಇರುವ ನಿರ್ವಾಹಕರಿಗೆ ತಿಳಿಸಬೇಕು. ಕಾರ್ಡ್‌ನ ಮಾರಾಟ ಬೆಲೆ ರೂ 50/-. ಸ್ಮಾರ್ಟ್ ಕಾರ್ಡ್‌ಗಳಲ್ಲಿ ಲಭ್ಯವಿರುವ ಶೇ 5% ಪ್ರಯಾಣ ದರದ ರಿಯಾಯಿತಿಯು ಎನ್‌ಸಿಎಂಸಿ ಕಾರ್ಡ್ ಗಳಿಗೂ ಅನುಗುಣವಾಗುತ್ತದೆ. ರೂಪೇ ಕಾಮನ್ ಮೊಬಿಲಿಟಿ ಕಾರ್ಡ್‌ಗಳು (NCMC) ಎಲ್ಲಾ ಆರ್.ಬಿ.ಎಲ್ (RBL) ಬ್ಯಾಂಕ್ ಶಾಖೆ ಗಳಲ್ಲೂ ಲಭ್ಯವಿರುತ್ತದೆ.

ಪ್ರಯಾಣಕ್ಕೆ ಮತ್ತು ಶಾಪಿಂಗ್ಗೆ ಬೇಕಾಗಿರುವ ವಿವಿಧ ಕಾರ್ಡುಗಳ ಅಗತ್ಯತೆಯನ್ನು ಕಡಿಮೆ ಮಾಡುವ ಸಲುವಾಗಿ ನಮ್ಮ ಮೆಟ್ರೋ ಮುಂದಿನ ದಿನಗಳಲ್ಲಿ ಕಾಂಟ್ಯಾಕ್ಟ್‌ಲೆಸ್ ಸ್ಮಾರ್ಟ್ ಕಾರ್ಡ್‌ಗಳನ್ನು (CSC) ಹಂತ ಹಂತವಾಗಿ ತೆಗೆದುಹಾಕಲು ಕ್ರಮಗಳನ್ನು ತೆಗೆದುಕೊಳ್ಳುತ್ತಿದೆ.

ರುಪೇ ನ್ಯಾಷನಲ್ ಕಾಮನ್ ಮೊಬಿಲಿಟಿ ಕಾರ್ಡ್ (NCMC) ಮೆಟ್ರೋ ನಿಲ್ದಾಣಗಳಲ್ಲಿ ಕಾರ್ಯಾಚರಣೆಯ ಸಮಯದಲ್ಲಿ ಮಾರಾಟಕ್ಕೆ ಲಭ್ಯವಿರುತ್ತದೆ ಮತ್ತು ಕಾಂಟ್ಯಾಕ್ಟ್‌ಲೆಸ್ ಸ್ಮಾರ್ಟ್ ಕಾರ್ಡ್‌ಗಳು (CSC) ಬೆಳಿಗ್ಗೆ 8.00 ಗಂಟೆಯಿಂದ 11.00 ಗಂಟೆಯವರೆಗೆ ಮತ್ತು ಸಂಜೆ 5.00 ಗಂಟೆಯಿಂದ ರಾತ್ರಿ 8.00 ಗಂಟೆಯವರೆಗೆ ಮಾತ್ರ ಮಾರಾಟಕ್ಕೆ ಲಭ್ಯವಿರುತ್ತದೆ.

ದೇಶಾದ್ಯಂತ ಪ್ರಯಾಣಕ್ಕೆ ಮತ್ತು ಶಾಪಿಂಗ್ಗೆ ಅಗತ್ಯಗಳಿಗಾಗಿ ಒಂದೇ ಕಾರ್ಡ್ ಹೊಂದುವ ಅನುಕೂಲವನ್ನು ನಾಗರೀಕರ ತಿಳುವಳಿಕೆಗಾಗಿ, ನಿಮ್ಮ ಗೌರವಾನ್ವಿತ ಮಾಧ್ಯಮದಲ್ಲಿ ಪ್ರಕಟಿಸಲು ಕೋರಿದೆ.

**ಸಹಿ/-**

**ಮುಖ್ಯ ಸಾರ್ವಜನಿಕ ಸಂಪರ್ಕ ಅಧಿಕಾರಿ**

Phone: +91-(0)80-22969300 / 22969301, Fax: +91-(0)80-22969222, GST No.: AACCB4881D
E-mail: contactus@bmrc.co.in Web: www.bmrc.co.in, CIN No.: U16286KA1994GOI016286